# ಕರ್ನಾಟಕ ಸರ್ಕಾರ

**ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು – 12.**

ಸಂಖ್ಯೆ: ಪಪೂಶಿಇ/ಪರೀಕ್ಷೆ/ನೊ&ಫ/2017-18. ದಿನಾಂಕ: 26.07.2018

## ಸು ತ್ತೋ ಲೆ

**ವಿಷಯ:** ಜುಲೈ 2018ರ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆಯ ಫಲಿತಾಂಶ ಪ್ರಕಟಣೆ ಹಾಗೂ ಮಾರ್ಚ್ 2019ರಲ್ಲಿ ನಡೆಯುವ ವಾರ್ಷಿಕ ಪರೀಕ್ಷೆಗೆ ಅರ್ಜಿ ಸಲ್ಲಿಸುವ ಬಗ್ಗೆ.

* * * *

ಜುಲೈ 2018ರ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆಯ ಫಲಿತಾಂಶವನ್ನು ದಿನಾಂಕ 26.07.2018ರ ಮಧ್ಯಾಹ್ನ 12:30 ಗಂಟೆಗೆ ಇಲಾಖೆಯ ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು ಹಾಗೂ ದಿನಾಂಕ 27.07.2018 ರಂದು ಬೆಳಿಗ್ಗೆ 11:00 ಗಂಟೆಗೆ ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಕಟಿಸಲು ಸೂಚಿಸಿದೆ.

**ಪ್ರಕಟಿಸಲಾದ ಫಲಿತಾಂಶದಲ್ಲಿ ನ್ಯೂನ್ಯತೆ ಹಾಗೂ ಮಾರ್ಚ್ 2019ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗಳ ಬಗ್ಗೆ ಪ್ರಾಂಶುಪಾಲರಿಗೆ ವಿಶೇಷ ಸೂಚನೆ:**

1. ದ್ವಿತೀಯ ಪಿಯುಸಿ ಪರೀಕ್ಷೆಗಳ ಫಲಿತಾಂಶಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರದ ನಡಾವಳಿ ಸಂಖ್ಯೆ: ಎಡಿ 465 ಡಿಜಿಡಬ್ಲ್ಯೂ 2016 (2) ದಿನಾಂಕ 25-03-2017ರ ಅನ್ವಯ ಘೋಷಿತ **'ಕರ್ನಾಟಕ ಪ್ರೀ ಯೂನಿವರ್ಸಿಟಿ ಕೋರ್ಸ್ ಸ್ಟೇಟ್ ಲೆವೆಲ್ ಪರೀಕ್ಷೆ (ತಿದ್ದುಪಡಿ) ನಿಯಮಾವಳಿ 2017**ರ ರಂತೆ ಘೋಷಿಸಲಾಗಿದೆ.

2. ಪ್ರತಿ ಕಾಲೇಜಿಗೆ ಎಲ್ಲಾ ವಿದ್ಯಾರ್ಥಿಗಳ ಫಲಿತಾಂಶ ಹೊಂದಿರುವ ಪಟ್ಟಿಯನ್ನು ದ್ವಿಪ್ರತಿಯಲ್ಲಿ ಕಳುಹಿಸಿ ಕೊಡಲಾಗಿದೆ.

3. ಪ್ರಾಂಶುಪಾಲರು ತಮ್ಮ ಕಾಲೇಜಿಗೆ ಸಂಬಂಧಿಸಿದ ಫಲಿತಾಂಶದ ಪಟ್ಟಿಗಳನ್ನು ಸೂಚನಾ ಫಲಕದಲ್ಲಿ ಪ್ರಕಟಿಸತಕ್ಕದ್ದು.

4. ಜುಲೈ 2018ರಲ್ಲಿ ನಡೆಸಿದ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆಗೆ ಹಾಜರಾಗಿರುವ ವಿದ್ಯಾರ್ಥಿಗಳ ಪ್ರಕಟಿತ ಫಲಿತಾಂಶದಲ್ಲಿ ನ್ಯೂನ್ಯತೆ ಇದ್ದಲ್ಲಿ ದಿನಾಂಕ 10.08.2018 ರೊಳಗಾಗಿ ಕೊಠಡಿ ಮೇಲ್ವಿಚಾರಕರ ದಿನಚರಿ, Marked Nominal Roll ಮತ್ತು ಇತರೆ ಪೂರಕ ದಾಖಲೆಗಳನ್ನು ಕೇಂದ್ರ ಕಛೇರಿಗೆ ಖುದ್ದಾಗಿ ಸಲ್ಲಿಸಿ ಫಲಿತಾಂಶವನ್ನು ಸರಿಪಡಿಸಿಕೊಳ್ಳುವಂತೆ ಸೂಚಿಸಿದೆ. ತದನಂತರ ಬಂದಂತಹ ಯಾವುದೇ ರೀತಿಯ ಮನವಿಗಳನ್ನು ಪರಿಗಣಿಸಲಾಗುವುದಿಲ್ಲ, ಯಾವುದೇ ಕಾರಣಕ್ಕೂ ವಿದ್ಯಾರ್ಥಿಗಳನ್ನು / ಪೋಷಕರನ್ನು ಫಲಿತಾಂಶಕ್ಕೆ ಸಂಬಂಧಿಸಿದಂತೆ ಕೇಂದ್ರ ಕಛೇರಿಗೆ ಕಳುಹಿಸಬಾರದು. ಕಳುಹಿಸಿದಲ್ಲಿ ಮುಂದೆ ಸಂಭವಿಸಬಹುದಾದ ಆಗುಹೋಗುಗಳಿಗೆ ಪ್ರಾಚಾರ್ಯರನ್ನೇ ನೇರ ಹೊಣೆಗಾರರನ್ನಾಗಿಸಲಾಗುವುದು.

5. ಜುಲೈ 2018ರಲ್ಲಿ ನಡೆಸಿದ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳಿಂದ ಮಾರ್ಚ್ 2019ರಲ್ಲಿ ನಡೆಸುವ ವಾರ್ಷಿಕ ಪರೀಕ್ಷೆಗೆ ಫಲಿತಾಂಶಪಟ್ಟಿ ಆಧಾರದ ಮೇರೆಗೆ ಅನುತ್ತೀರ್ಣ ವಿಷಯಗಳಿಗೆ ನಿಯಮಾನುಸಾರ ಪರೀಕ್ಷಾ ಶುಲ್ಕ ಕಟ್ಟಿಸಿಕೊಳ್ಳುವುದು. ಅನುತ್ತೀರ್ಣ ಓ.ಎಂ.ಆರ್ ಅರ್ಜಿಗಳು ಕಾಲೇಜಿಗೆ ತಲುಪಿದ ಕೂಡಲೇ ಶುಲ್ಕಕಟ್ಟಿದ ಅಭ್ಯರ್ಥಿಗಳ ಓ.ಎಂ.ಆರ್ ಅರ್ಜಿಗಳನ್ನು ಭರ್ತಿಮಾಡಿ ಉಪನಿರ್ದೇಶಕರ ಕಛೇರಿಗೆ ಒಂದೇ ಕಂತಿನಲ್ಲಿ ನಿಗಧಿತ ದಿನಾಂಕದಂದು ಸಲ್ಲಿಸುವುದು.

6. ಮಾರ್ಚ್ 2018ರ ದ್ವಿತೀಯ ಪಿಯುಸಿ ಪರೀಕ್ಷೆ ಹಾಗೂ ಅದಕ್ಕೂ ಹಿಂದಿನ ಪರೀಕ್ಷೆಗಳಲ್ಲಿ ಅನುತ್ತೀರ್ಣರಾಗಿರುವ ವಿದ್ಯಾರ್ಥಿಗಳಿಂದ ಮೂಲ ಓಎಂಆರ್ / ಅನುತ್ತೀರ್ಣ ಅರ್ಜಿ ಅಥವಾ ಹಿಂದಿನ ಎಂ.ಸಿ.ಎ. (MARKS CARD CUM APPLICATION) ಗಳ ಆಧಾರದ ಮೇಲೆ ಪರೀಕ್ಷಾ ಶುಲ್ಕಗಳನ್ನು ಕಟ್ಟಿಸಿಕೊಳ್ಳುವುದು.

7. ಜುಲೈ 2018ರ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳು ಉತ್ತೀರ್ಣರಾದ ವಿಷಯಗಳನ್ನು ನಿಯಮಾನುಸಾರ ಫಲಿತಾಂಶ ತಿರಸ್ಕರಿಸಿ ಪರೀಕ್ಷೆ ಬರೆಯಲು ಇಚ್ಛಿಸಿದಲ್ಲಿ, ಮೂಲ ಅನುತ್ತೀರ್ಣ ಓ.ಎಂ.ಆರ್.ಗಳನ್ನು ಪಡೆದುಕೊಂಡ ನಂತರವೇ ಕ್ರಮವಹಿಸುವುದು. ಫಲಿತಾಂಶ ತಿರಸ್ಕರಣೆ ಅರ್ಜಿಯ ಹಿಂಬದಿಯಲ್ಲಿನ ಸೂಚನೆಗಳನ್ನು ಗಮನಿಸುವುದು ಹಾಗೂ ಕೇಂದ್ರ ಕಛೇರಿಯಿಂದ ಅನುಮತಿ ಪಡೆಯುವುದು.

8. ಮಾರ್ಚ್ 2018 ಹಾಗೂ ಜುಲೈ-2018ರ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುವ ವಿದ್ಯಾರ್ಥಿಗಳು ಫಲಿತಾಂಶ ತಿರಸ್ಕರಿಸಿ ಮಾರ್ಚ್ 2019ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ ಬರೆಯಲು ಇಚ್ಛಿಸಿದ್ದಲ್ಲಿ, ಅಂತಹ ವಿದ್ಯಾರ್ಥಿಗಳ **ಮೂಲ ಅಂಕಪಟ್ಟಿಗಳ** (Original Marks card) ಆಧಾರದ ಮೇಲೆ ನಿಯಮಾನುಸಾರ ಫಲಿತಾಂಶ ತಿರಸ್ಕರಣೆಗೆ ಅವಕಾಶ ನೀಡಿದ್ದು, ವಿದ್ಯಾರ್ಥಿಯು ಫಲಿತಾಂಶ ತಿರಸ್ಕರಿಸಲು ಇಲಾಖೆಯ ಪೂರ್ವಾನುಮತಿ ಪಡೆಯುವುದು ಕಡ್ಡಾಯವಾಗಿರುತ್ತದೆ.

9. ಸರ್ಕಾರದ ಆದೇಶ ಸಂಖ್ಯೆ ಇಡಿ 195 ಡಿಜಿಡಿ 2017 ಬೆಂಗಳೂರು ದಿನಾಂಕ: 20.03.2018 ರಂತೆ ಪರೀಕ್ಷಾ ಶುಲ್ಕ ಹಾಗೂ ಫಲಿತಾಂಶ ತಿರಸ್ಕರಣಾ ಶುಲ್ಕ ಹಾಗೂ ದಂಡ ಶುಲ್ಕಗಳನ್ನು ಪರಿಷ್ಕರಿಸಿದೆ.

**ಮಾರ್ಚ್ 2019ರಲ್ಲಿ ನಡೆಸಲಾಗುವ ವಾರ್ಷಿಕ ಪರೀಕ್ಷೆಗೆ ಅನುತ್ತೀರ್ಣ ವಿದ್ಯಾರ್ಥಿಗಳು ಪಾವತಿಸಬೇಕಾದ ಶುಲ್ಕ ಮತ್ತು ಫಲಿತಾಂಶ ತಿರಸ್ಕರಣಾ ಶುಲ್ಕಗಳ ವಿವರ:**

| ಪರೀಕ್ಷಾ ಶುಲ್ಕ (ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಹಾಗೂ ಪ್ರವರ್ಗ-1ರ ವಿದ್ಯಾರ್ಥಿಗಳನ್ನು ಹೊರತು ಪಡಿಸಿ) | |
|---|---|
| ಒಂದು ವಿಷಯಕ್ಕೆ | ರೂ 140/- |
| ಎರಡು ವಿಷಯಕ್ಕೆ | ರೂ 270/- |
| ಮೂರು ಅಥವಾ ಹೆಚ್ಚಿನ ವಿಷಯಗಳು | ರೂ 400/- |
| ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಹಾಗೂ ಪ್ರವರ್ಗ-1ರ ವಿದ್ಯಾರ್ಥಿಗಳು ಸೇರಿದಂತೆ ಎಲ್ಲಾ ವಿದ್ಯಾರ್ಥಿ / ವಿದ್ಯಾರ್ಥಿನಿಯರಿಂದ ಕಡ್ಡಾಯವಾಗಿ ಸಲ್ಲಿಸಬೇಕಾದ ಅಂಕಪಟ್ಟಿ ಶುಲ್ಕ | ರೂ 50/- |

| ಫಲಿತಾಂಶ ತಿರಸ್ಕರಣಾ ಶುಲ್ಕ | |
|---|---|
| ಪ್ರಥಮ ಬಾರಿಗೆ ಒಂದು ವಿಷಯಕ್ಕೆ | ರೂ 175/- |
| ದ್ವಿತೀಯ ಹಾಗೂ ಅಂತಿಮ ಬಾರಿಗೆ ಒಂದು ವಿಷಯಕ್ಕೆ | ರೂ 350/- |

**ಮಾರ್ಚ್ 2019ರಲ್ಲಿ ನಡೆಸುವ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಅನುತ್ತೀರ್ಣ ಅಭ್ಯರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಲು ನಿಗದಿಪಡಿಸಿರುವ ದಿನಾಂಕಗಳು:**

| ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಲು ಕಡೇ ದಿನಾಂಕ | ಕಾಲೇಜಿನವರು ಪರೀಕ್ಷಾ ಶುಲ್ಕವನ್ನು ಒಂದೇ ಕಂತಿನಲ್ಲಿ ಖಜಾನೆಗೆ ಸಂದಾಯ ಮಾಡಬೇಕಾದ ದಿನಾಂಕ | ಕಾಲೇಜಿನವರು ಪರೀಕ್ಷಾ ಅರ್ಜಿಗಳನ್ನು ಮೂಲ ಚಲನ್ ಸಹಿತ ಜಿಲ್ಲಾ ಉಪನಿರ್ದೇಶಕರ ಕಛೇರಿಗೆ ಕಡ್ಡಾಯವಾಗಿ ಸಲ್ಲಿಸಬೇಕಾದ ದಿನಾಂಕ |
|---|---|---|
| **30.08.2018** | **31.08.2018** | **01.09.2018** |

ಜಿಲ್ಲಾ ಉಪನಿರ್ದೇಶಕರು ಪ್ರಾಂಶುಪಾಲರಿಂದ ಸ್ವೀಕರಿಸಿದ ಪರೀಕ್ಷಾ ಅರ್ಜಿಗಳನ್ನು, ಕಾಲೇಜುವಾರು ಕ್ರೋಢೀಕೃತ ವಿದ್ಯಾರ್ಥಿಗಳ ಪಟ್ಟಿ ಹಾಗೂ ಹಣ ಪಾವತಿಸಿರುವ ಮೂಲ ಚಲನ್‌ನನ್ನು ಖುದ್ದಾಗಿ ಕೇಂದ್ರ ಕಛೇರಿಗೆ ಸಲ್ಲಿಸಬೇಕಾದ ದಿನಾಂಕ **03.09.2018.**

**ವಿಶೇಷ ಸೂಚನೆ:**

**ಪರೀಕ್ಷಾ ಶುಲ್ಕ ಪಾವತಿಸುವ ದಿನಾಂಕವನ್ನು ಯಾವುದೇ ಕಾರಣಕ್ಕೂ ವಿಸ್ತರಿಸಲಾಗುವುದಿಲ್ಲ.**

26/7

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಗಳು:

1. ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರಿಗೆ – ಮಾಹಿತಿಗಾಗಿ ಹಾಗೂ ಒಂದು ಪ್ರತಿಯನ್ನು ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ತಿಳಿಸಿದೆ.
2. ಪದವಿ ಪೂರ್ವ ಶಿಕ್ಷಣ ಬೋಧಿಸುವ ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರಿಗೆ. (ವಿದ್ಯಾರ್ಥಿಗಳಿಗೆ ಈ ಕುರಿತು ಸೂಕ್ತ ನಿರ್ದೇಶನ ನೀಡಲು)
3. ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರಿಗೆ.
4. ಗಣಕ ಶಾಖೆಗೆ.